ಕರ್ನಾಟಕ ವಿಧಾನ ಪರಿಷತ್ತು

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು : ಡಾ॥ ಸೂರಜ್ ರೇವಣ್ಣ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 648

ಉತ್ತರಿಸಬೇಕಾದ ದಿನಾಂಕ : 22-02-2022

ಉತ್ತರಿಸಬೇಕಾದ ಸಚಿವರು : ಸಹಕಾರ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
ಅ	ರಾಜ್ಯದ ಬೀದಿ ವ್ಯಾಪಾರಿಗಳು ಹಾಗೂ ತಳ್ಳುಗಾಡಿಯ ವ್ಯಾಪಾರಿಗಳು, ವ್ಯಾಪಾರದ ಉದ್ದೇಶಕ್ಕೆ ಮೀಟರ್ ಬಡ್ಡಿ ವ್ಯಕ್ತಿಗಳಿಂದ ಹಾಗೂ ಖಾಸಗಿ ಲೇವಾದೇವಿದಾರರಿಂದ ಸಾಲ ಪಡೆದು ಆರ್ಥಿಕ ಸಂಕಷ್ಟಕ್ಕೆ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಹೌದು.
ಆ	ಬಂದಿದ್ದಲ್ಲಿ, ಸದರಿ ಬಡ ಹಾಗೂ ಆರ್ಥಿಕ ಸಂಕಷ್ಟಕ್ಕೆ ಸಿಲುಕಿರುವ ಬೀದಿ ವ್ಯಾಪಾರಿಗಳಿಗೆ ವ್ಯಾಪಾರ ನಡೆಸಿ ಜೀವ ನಿರ್ವಹಣೆಗೆ ಅನುಕೂಲವಾಗುವ ದೃಷ್ಟಿಯಿಂದ ಈ ಹಿಂದೆ ಇದ್ದಂತಹ ಬಡವರ ಬಂಧು ಯೋಜನೆಯನ್ನು ಜಾರಿಗೊಳಿಸುವ ಉದ್ದೇಶ ಸರ್ಕಾರದ ಮುಂದಿದೆಯೇ; (ಸಂಪೂರ್ಣ ಮಾಹಿತಿ ನೀಡುವುದು)	ಬಡ ಹಾಗೂ ಆರ್ಥಿಕ ಸಂಕಷ್ಟಕ್ಕೆ ಸಿಲುಕಿರುವ ಬೀದಿ ವ್ಯಾಪಾರಿಗಳಿಗೆ ವ್ಯಾಪಾರ ನಡೆಸಿ ಜೀವ ನಿರ್ವಹಣೆಗೆ ಅನುಕೂಲವಾಗುವ ದೃಷ್ಟಿಯಿಂದ, ಸದರಿ ವ್ಯಾಪಾರಿಗಳು "ಬಡವರ ಬಂಧು" ಯೋಜನೆಯಲ್ಲಿ ಪಡೆದ ಸಾಲಗಳ ಪೈಕಿ ದಿನಾಂಕ:29.03.2021ಕ್ಕೆ ಹೊರಬಾಕಿ ಹೊಂದಿರುವ ಅಸಲು ಮತ್ತು ಬಡ್ಡಿ ಸೇರಿ ಒಟ್ಟು ರೂ.7.62 ಕೋಟಿಗಳ ಮೊತ್ತವನ್ನು ಮನ್ನಾ ಮಾಡಿ ಈ ಯೋಜನೆಯನ್ನು ಮುಕ್ತಾಯಗೊಳಿಸಲು ಆದೇಶ ಹೊರಡಿಸಲಾಗಿರುತ್ತದೆ. ಕೇಂದ್ರ ಸರ್ಕಾರದ 'ಪಿಎಂ ಸ್ವನಿಧಿ' ಯೋಜನೆ ಹಾಗೂ ರಾಜ್ಯ ಸರ್ಕಾರದ 'ಬಡವರ ಬಂಧು' ಯೋಜನೆಯ ಅಂಶಗಳು ಒಂದೇ ರೀತಿಯಿದ್ದು ಫಲಾನುಭವಿಗಳ ಆಯ್ಕೆಯಲ್ಲಿ ಸಮಸ್ಯೆಯುಂಟಾಗುತ್ತಿರುವುದರಿಂದ, ರಾಜ್ಯ ಸರ್ಕಾರದ 'ಬಡವರ ಬಂಧು' ಯೋಜನೆಯನ್ನು ಸ್ಥಗಿತಗೊಳಿಸಲಾಗಿದೆ. ಈ ಹಿಂದೆ ಇದ್ದಂತಹ ಬಡವರ ಬಂಧು ಯೋಜನೆಯನ್ನು ಮತ್ತೆ ಜಾರಿಗೊಳಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ.

ಇ	ರಾಜ್ಯದ ಮಧ್ಯಮ ಹಾಗೂ ಬಡ ಕುಟುಂಬ ಮಹಿಳೆಯರು ಸ್ವಾವಲಂಬಿಗಳಾಗಿ ಜೀವನ ನಡೆಸಲು ಆರ್ಥಿಕವಾಗಿ ಬಲಹೀನರಾಗಿರುವ ವಿಷಯವು ಸರ್ಕಾರದ ಗಮನಕ್ಕೆ ಬಂದಿದೆಯೇ;	ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.
ಈ	ಬಂದಿದ್ದಲ್ಲಿ, ಈ ಹಿಂದೆ ಇದ್ದಂತಹ ಗೃಹಲಕ್ಷ್ಮೀ ಯೋಜನೆಯನ್ನು ಪುನರ್ ಜಾರಿಗೊಳಿಸುವ ಉದ್ದೇಶ ಸರ್ಕಾರದ ಮುಂದಿದೆಯೇ; ಇಲ್ಲದಿದ್ದಲ್ಲಿ, ಕಾರಣಗಳೇನು? (ಸಂಪೂರ್ಣ ಮಾಹಿತಿ ನೀಡುವುದು)	ಮಹಿಳೆಯರ ಸ್ವಾವಲಂಬನೆಯ ದೃಷ್ಟಿಯಿಂದ ಶೂನ್ಯ ಬಡ್ಡಿದರದಲ್ಲಿ ರೂ.3.00 ಲಕ್ಷಗಳವರೆಗೆ ಅಲ್ಪಾವಧಿ ಬೆಳೆಸಾಲ ನೀಡುವ ಯೋಜನೆಯಡಿಯಲ್ಲಿ ಸಾಲ ಪಡೆಯಲು ಅವಕಾಶವಿದೆ. ಅದೇ ರೀತಿ ಮಹಿಳಾ ಸ್ವ-ಸಹಾಯ ಗುಂಪುಗಳಿಗೆ ಶೂನ್ಯ ಬಡ್ಡಿದರದಲ್ಲಿ ರೂ.5.00 ಲಕ್ಷಗಳವರೆಗೆ ಸಾಲ ಪಡೆಯಲು ಅವಕಾಶವಿರುತ್ತದೆ. ಇದರ ಸದುಪಯೋಗವನ್ನು ಮಹಿಳೆಯರು ಪಡೆಯಲು ಅವಕಾಶವಿರುತ್ತದೆ. ಗೃಹಲಕ್ಷ್ಮೀ ಯೋಜನೆಯನ್ನು ಪುನರ್ ಜಾರಿಗೊಳಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ,

ಸಂಖ್ಯೆ ಸಿಒ 56 ಸಿಎಲ್‌ಎಸ್ 2022

(ಎಸ್. ಟಿ. ಸೋಮಶೇಖರ್)
ಸಹಕಾರ ಸಚಿವರು